# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ ಮೈಸೂರು

ವಿಷಯ: 2018-19ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ:1. ಈ ಕಛೇರಿ ಇದೇ ಸಮ ಸಂಖ್ಯೆ ಆದೇಶ ದಿನಾಂಕ:16.8.2018
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹೇಮಗಂಗೋತ್ರಿ, ಹಾಸನ, ಇವರ ಪತ್ರ ಸಂಖ್ಯೆ:ಪಿ.ಜಿ.ಸಿ.ಹೆಚ್/325/401/2018-19, ದಿನಾಂಕ:27-08-2018 ಮತ್ತು ದಿನಾಂಕ 28.9.2018.
3. ಮಾನ್ಯಕುಲಪತಿಯವರ ಆದೇಶ ದಿನಾಂಕ: 15-10-2018.

**ಆದೇಶ ಸಂಖ್ಯೆ: ಅ10/212/2018-19 ದಿನಾಂಕ 16ನೇ ಅಕ್ಟೋಬರ್ 2018**

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಉಲ್ಲೇಖಿತ (1)ರ ಆದೇಶದ ಮುಂದುವರೆಯಾಗಿ ಕೆಳಕಂಡ ಅತಿಥಿ ಉಪನ್ಯಾಸಕರಿಗೆ 2018-19 ನೇ ಸಾಲಿನಲ್ಲಿ ಈಗಾಗಲೇ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರವನ್ನು ಕೋಷ್ಟಕದಲ್ಲಿ ನಮೂದಿಸಿರುವಂತೆ ಪರಿಷ್ಕರಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಉಲ್ಲೇಖ (1) ರ ಆದೇಶದಲ್ಲಿ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರ | ನಿಗದಿಪಡಿಸಿದ್ದ ಸಂಭಾವನೆ ರೂ.ಗಳಲ್ಲಿ | ಪ್ರಸ್ತುತ ನಿಗದಿಪಡಿಸಿರುವ (ಥಿಯರಿ/ ಕಾರ್ಯಭಾರ) * | ಪ್ರಸ್ತುತ ನಿಗದಿಪಡಿಸಿರುವ ಮಾಹೆಯಾನ ಸಂಭಾವನೆ ರೂ.ಗಳಲ್ಲಿ | ಸ್ನಾತಕೋತ್ತರ ವಿಭಾಗ/ಕೇಂದ್ರ/ ಘಟಕ ಕಾಲೇಜು |
|---|---|---|---|---|---|---|
| ಧರ್ಮೇಗೌಡ ಟಿ.ವೈ., ತಟ್ಟೆಕೆರೆ, ಮೂಳಗೆರೆ ಪೋಸ್ಟ್, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ. | ವಾಣಿಜ್ಯಶಾಸ್ತ್ರ | 08 | 15,000/- | 12 | 22,500/- | ಸ್ನಾತಕೋತ್ತರ ಕೇಂದ್ರ, ಹಾಸನ |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ಕೇಂದ್ರದ ನಿರ್ದೇಶಕರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಶಾಖೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

**ಷರತ್ತುಗಳು:**

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಶಾಶಿಇ/44/ಕಾಅನೇ/2012-13ನೇ ಎಎಸ್-1, ದಿನಾಂಕ **02.7.2013**ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2018-19ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು

<u>ಮುಚ್ಚಳಿಕೆ</u>

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2018-19ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ ಶಾಶಿಇ/44/ಅಉಸೇ/2012-13ನೇ ಪಾವಿ-1 ದಿನಾಂಕ 02.7.2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದು ಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ. ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧರಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ,

ಕುಲಸಚಿವರು

20/10/18

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ -ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹಾಸನ-ಇವರ ಮುಖಾಂತರ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಹೇಮಗಂಗೋತ್ರಿ, ಹಾಸನ-ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
6. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
7. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.